ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ

ಉದಯಕಾಲ ನ್ಯೂಸ್, ಬಾಗೇಪಲ್ಲಿ: ವಾಹನ ಸವಾರರು ರಸ್ತೆ ನಿಯಮ ಕಡ್ಡಾಯವಾಗಿ ಪಾಲಿಸಬೇಕು ಎಂದು ಹರಿನಾಥ ರೆಡ್ಡಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ ಹರಿನಾಥರೆಡ್ಡಿ ಹೇಳಿದರು.

ತಾಲೂಕು ಪಾತಪಾಳ್ಯ ಹೋಬಳಿ ಹಾಗೂ ತೊಳಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹರಿನಾಥ ರೆಡ್ಡಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹೆಲ್ಮೆಟ್‌ಗಳನ್ನು ಉಚಿತವಾಗಿ ವಿತರಿಸಿ ಮಾತನಾಡಿ, ದ್ವಿಚಕ್ರ ವಾಹನಗಳೇ ಹೆಚ್ಚು ಅಪಘಾತಕ್ಕೀಡಾಗುತ್ತವೆ. ಅಪಘಾತಗಳಲ್ಲಿ ಹೆಲ್ಮೆಟ್ ಧರಿಸದೆ ಸಾವನ್ನಪ್ಪಿರುವರ ಸಂಖ್ಯೆ ಹೆಚ್ಚಾಗಿದೆ. ಹೆಲ್ಮೆಟ್ ಧರಿಸದಿದ್ದರೆ ತಲೆಗೆ ಪೆಟ್ಟಾದಾಗ ಸಾಯುವ ಸಂಭವ ಹೆಚ್ಚಿರುತ್ತದೆ ಎಂದರು.

ವಾಹನ ಸವಾರರ ಅಮೂಲ್ಯ ಜೀವ ಉಳಿಸಿಕೊಳ್ಳಲಿ ಎಂಬ ಕಾರಣಕ್ಕೆ ತಮ್ಮ ಟ್ರಸ್ಟ್ ವತಿಯಿಂದ ಇದುವರೆಗೆ ಗುಡಿಬಂಡೆ 8 ಗ್ರಾಪಂ ವ್ಯಾಪ್ತಿಯಲ್ಲಿ ಸುಮಾರು 20 ಸಾವಿರ ಹೆಲ್ಮೆಟ್‌ಗಳನ್ನು ವಿತರಿಸಲಾಗಿದೆ. ಅದೇ ರೀತಿಯಲ್ಲಿ ಬಾಗೇಪಲ್ಲಿ ಹಾಗೂ ಚೇಳೂರು ತಾಲೂಕಿನಲ್ಲಿ ಸುಮಾರು 30 ಸಾವಿರ ವಾಹನ ಸವಾರರಿಗೆ ಹೆಲ್ಮೆಟ್ ವಿತರಿಸುವ ಕಾರ್ಯಕ್ರಮ ಇದೆ.ಈಗ ಪ್ರತಿಯೊಬ್ಬರಿಗೂ ಹೆಲ್ಮೆಟ್ ನೀಡಲಾಗುತ್ತಿದೆ ಎಂದರು.

ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ರಾಮಲಿಂಗಪ್ಪ ಮಾತನಾಡಿ, ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕೊಡುವುದು ಜವಾಬ್ದಾರಿಯುತ ಸಮಾಜಮುಖಿ ಸೇವೆ. ರಾಜಕೀಯ ಮಾಡಲು ನೀಡುತ್ತಿಲ್ಲ. ವಾಹನ ಚಾಲನೆ ವೇಳೆ ಹೆಲ್ಮೆಟ್ ಧರಿಸುವುದರಿಂದ ಅಪಾಯದಿಂದ ಪಾರಾಗಬಹುದು. ಹೆಲ್ಮೆಟ್‌ಗಳನ್ನು ಮನೆಯಲ್ಲಿ ಇಡದೆ ಚಾಲನೆ ಸಮಯದಲ್ಲಿ ಕಡ್ಡಾಯವಾಗಿ ಬಳಸಿ ಜೀವ ರಕ್ಷಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಜೆ.ಪಿ. ಚಂದ್ರಶೇಖರರೆಡ್ಡಿ, ಸುಧಾಕರರೆಡ್ಡಿ, ಸುದರ್ಶನ್ ನಾಯ್ಡು,ಪಾತಪಾಳ್ಯ ಗ್ರಾ.ಪಂ. ಅಧ್ಯಕ್ಷ ಮಂಜುನಾಥ, ಸದಸ್ಯ ಮಹೇಶ್, ಬಯ್ಯಾರೆಡ್ಡಿ, ಸತೀಶ್ ಕುರ್ಮಾ, ಚಿನ್ನಪ್ಪಯ್ಯ, ರಾಮಪ್ಪ ಸೇರಿದಂತೆ ಹಲವಾರು ಜೆಡಿಎಸ್ ಹಾಗೂ ಬಿಜೆಪಿ ಮುಖಂಡರು ಹಾಜರಿದ್ದರು.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರಿಗೆ ಬೀಳ್ಕೊಡುಗೆ

ಬಂಗಾರಪೇಟೆ: ಮಗುವಿನ ಪಾಲನೆ ಹಾಗೂ ಆರೋಗ್ಯ ಕಾಪಾಡುವ ಕೆಲಸ ಮಾಡುವ ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕಿಯರು ಸಮಾಜದ ತಾಯಂದಿರು ಎಂದು ಶಾಸಕ ಎಸ್.ಎನ್. ನಾರಾಯಣಸ್ವಾಮಿ ಹೇಳಿದರು.

ಪಟ್ಟಣದ ಎಸ್.ಎನ್ ರೆಸಾರ್ಟ್‌ನಲ್ಲಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮಹಾಮಂಡಳಿ ವತಿಯಿಂದ ಹಮ್ಮಿಕೊಂಡಿದ್ದ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿ, ಈಗ ನಿವೃತ್ತರಾದ ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕಿಯರು ಸುಮಾರು 40 ವರ್ಷಗಳ ಕಾಲ ತಮ್ಮ ಸೇವೆಯನ್ನು ಮಾಡಿದ್ದಿರಿ. ನಿಮ್ಮ ಸೇವೆ ನಿಜಕ್ಕೂ ಶ್ಲಾಘನೀಯ ಎಂದು ಹೇಳಿದರು.

ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮಹಾ ಮಂಡಳಿ ರಾಜ್ಯಾಧ್ಯಕ್ಷ ಜಿ.ಆರ್. ಶಿವಶಂಕರಪ್ಪ, ರಾಜ್ಯ ಕಾರ್ಯದರ್ಶಿ ನಾಗರತ್ನಮ್ಮ, ರಾಜ್ಯ ಉಪಾಧ್ಯಕ್ಷೆ ಸರಸ್ವತಿಮ್ಮ, ಜಿಲ್ಲಾಧ್ಯಕ್ಷೆ ಪ್ರಭಾವತಿ, ಜಿಲ್ಲಾ ಕಾರ್ಯದರ್ಶಿ ಚಿನ್ನಮ್ಮ, ಬಂಗಾರಪೇಟೆ ಅಧ್ಯಕ್ಷೆ ಜ್ಯೋತಿ ಮತ್ತಿತರರಿದ್ದರು.

ಧಾರ್ಮಿಕ ಕೇಂದ್ರಗಳ ಪಾವಿತ್ರ್ಯತೆಗೆ ಧಕ್ಕೆಯ ಭೀತಿ | ನಿರ್ಧಾರ ಕೈ ಬಿಡದಿದ್ದಲ್ಲಿ ಗ್ರಾಮಸ್ಥರಿಂದ ಉಗ್ರ ಹೋರಾಟದ ಎಚ್ಚರಿಕೆ

ಜನವಸತಿ ಪ್ರದೇಶಕ್ಕೆ ಬಾರ್ ಸ್ಥಳಾಂತರ: ವಿರೋಧ

ಉದಯಕಾಲ ನ್ಯೂಸ್, ಕೋಲಾರ: ಜಿಲ್ಲೆಯ ಮಾಲೂರು ತಾಲೂಕಿನ ಮಾಸ್ತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 1ನೇ ಬ್ಲಾಕ್‌ನಲ್ಲಿ ಬಾರ್ ಮತ್ತು ರೆಸ್ಟೋರೆಂಟ್ ಸ್ಥಳಾಂತರಿಸುವ ನಿರ್ಧಾರಕ್ಕೆ ಸ್ಥಳೀಯ ನಿವಾಸಿಗಳಿಂದ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಜನವಸತಿ ಪ್ರದೇಶ ಹಾಗೂ ಪವಿತ್ರ ಧಾರ್ಮಿಕ ಕೇಂದ್ರಗಳ ಸಮೀಪ ಮದ್ಯದ ಅಂಗಡಿ ತೆರೆಯುವುದರಿಂದ ಸಾರ್ವಜನಿಕ ಶಾಂತಿ ಮತ್ತು ನೆಮ್ಮದಿಗೆ ಭಂಗ ಬರಲಿದೆ ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕಿದ್ದಾರೆ.

1800 ಕುಟುಂಬಗಳ ನೆಮ್ಮದಿಗೆ ಭಂಗ: ಪ್ರಸ್ತುತ ಈ ಭಾಗದಲ್ಲಿ ಸುಮಾರು 1800ಕ್ಕೂ ಹೆಚ್ಚು ಕುಟುಂಬಗಳು ದಶಕಗಳಿಂದ ವಾಸಿಸುತ್ತಿವೆ. ಈಗ ಇಲ್ಲಿಗೆ ಬಾರ್ ಸ್ಥಳಾಂತರ ಮಾಡುತ್ತಿರುವುದರಿಂದ ಇಡೀ ಬಡಾವಣೆಯಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಕುಡುಕರ ಹಾವಳಿಯಿಂದ ಮಹಿಳೆಯರು ಮತ್ತು ಮಕ್ಕಳು ರಸ್ತೆಯಲ್ಲಿ ಓಡಾಡುವುದು ಕಷ್ಟವಾಗುತ್ತದೆ. ನಮ್ಮ ನೆಮ್ಮದಿಯ ಜೀವನಕ್ಕೆ ಅಧಿಕಾರಿಗಳೇ ಕೊಳ್ಳಿ ಇಡುತ್ತಿದ್ದಾರೆ ಎಂದು ಸ್ಥಳೀಯ ಗೃಹಿಣಿಯರು ಅಳಲು ತೋಡಿಕೊಂಡಿದ್ದಾರೆ.

ದೇವಸ್ಥಾನ ಹಾಗೂ ಮಸೀದಿಗಳ ಅತೀ ಸಮೀಪ ಬಾರ್ ಸ್ಥಳಾಂತರವಾಗುತ್ತಿರುವ ಸ್ಥಳವು ಭಕ್ತರ ಭಾವನೆಗಳಿಗೆ ಧಕ್ಕೆ ತರುವಂತಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಪಿಳೇಕಮ್ಮ ದೇವಸ್ಥಾನ ಐತಿಹಾಸಿಕ ದೇವಸ್ಥಾನದಿಂದ ಕೇವಲ 117 ಮೀಟರ್ ಅಂತರದಲ್ಲಿದೆ. ಮದರಸ ಮತ್ತು ಮಸೀದಿ ಇಸ್ಲಾಂ ಧರ್ಮದ ಪವಿತ್ರ ಮದರಸ ಮತ್ತು ಮಸೀದಿಯಿಂದ ಕೇವಲ 241 ಮೀಟರ್ ದೂರದಲ್ಲಿದೆ. ರಾಮೇಗೌಡ ಬಡಾವಣೆ ನೂತನವಾಗಿ ನಿರ್ಮಾಣವಾಗಿರುವ ಈ ಬಡಾವಣೆಯಿಂದ ಕೇವಲ 30 ಮೀಟರ್ ಅಂತರದಲ್ಲಿದೆ. ಸರ್ವೆ ನಂ 13/4ರಲ್ಲಿ ಉದ್ದೇಶಿತ ಈ ಬಾರ್ ಸ್ಥಾಪನೆಯಿಂದ ಧಾರ್ಮಿಕ ಸ್ಥಳಗಳ ಪಾವಿತ್ರ್ಯತೆಗೆ ಧಕ್ಕೆಯಾಗುವುದಲ್ಲದೆ, ನಿವಾಸಿಗಳಿಗೂ ಅಸುರಕ್ಷಿತ ಭಾವನೆ ಕಾಡುತ್ತಿದೆ ಎಂದು ಹೇಳಿದರು.

ಸಾರ್ವಜನಿಕರ ಹಿತದೃಷ್ಟಿಯನ್ನು ಕಡೆಗಣಿಸಿ ಬಾರ್ ಸ್ಥಳಾಂತರಕ್ಕೆ ಅವಕಾಶ ನೀಡಬಾರದು ಎಂದು ಗ್ರಾಮಸ್ಥರು ಅಧಿಕಾರಿಗಳಿಗೆ ಮತ್ತು ಜನಪ್ರತಿನಿಧಿಗಳಿಗೆ ಮನವಿ ಮಾಡಿದ್ದಾರೆ.

ಈ ಕುರಿತು ಮಾತನಾಡಿದ ಸ್ಥಳೀಯ ಮುಖಂಡರಾದ ಚಲಪತಿ ಅವರು, ಜನರ ನೆಮ್ಮದಿಗಿಂತ ಆದಾಯವೇ ಮುಖ್ಯವಲ್ಲ, ಇಷ್ಟು ದೊಡ್ಡ ಜನವಸತಿ ಪ್ರದೇಶ ಮತ್ತು ಧಾರ್ಮಿಕ ಕೇಂದ್ರಗಳ ಮಧ್ಯೆ ಬಾರ್ ತೆರೆಯಲು ಅನುಮತಿ ನೀಡುವುದು ಸರಿಯಲ್ಲ. ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ ಈ ಸ್ಥಳಾಂತರ ಪ್ರಕ್ರಿಯೆಯನ್ನು ಕೈಬಿಡಬೇಕು. ಒಂದು ವೇಳೆ ಸಾರ್ವಜನಿಕರ ಆಕ್ರೋಶವನ್ನು ನಿರ್ಲಕ್ಷಿಸಿ ಬಾರ್ ಆರಂಭಿಸಿದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಅಧಿಕಾರಿಗಳ ಭೇಟಿ ಮತ್ತು ಭರವಸೆ: ಇದೇ ಸಂದರ್ಭದಲ್ಲಿ ಸ್ಥಳಕ್ಕೆ ಭೇಟಿ ನೀಡಿದ ಅಬಕಾರಿ ಇಲಾಖೆಯ ಅಧಿಕಾರಿಗಳು, ಪರಿಶೀಲನೆ ನಡೆಸಿದರು. ಸ್ಥಳೀಯರ ಅಹವಾಲುಗಳನ್ನು ಆಲಿಸಿದ ಅಧಿಕಾರಿಗಳು, ಸ್ಥಳದ ವಾಸ್ತವ ಸ್ಥಿತಿಯ ಬಗ್ಗೆ ವರದಿಯನ್ನು ಸಿದ್ಧಪಡಿಸಿ ಮೇಲಿನ ಅಧಿಕಾರಿಗಳಿಗೆ ಸಲ್ಲಿಸಲಾಗುವುದು. ವರದಿ ಸಲ್ಲಿಕೆಯಾದ ನಂತರ ಹಿರಿಯ ಅಧಿಕಾರಿಗಳ ಸೂಚನೆಯಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸ್ಥಳೀಯರ ಈ ತೀವ್ರ ಪ್ರತಿರೋಧದ ಹಿನ್ನೆಲೆಯಲ್ಲಿ ಇಲಾಖೆಯು ಯಾವ ನಿರ್ಧಾರ ತೆಗೆದುಕೊಳ್ಳಲಿದೆ ಎಂಬುದು ಈಗ ಕುತೂಹಲ ಮೂಡಿಸಿದೆ.

ಮತಾಂತರಕ್ಕೆ ಸರ್ಕಾರಿ ವಾಹನ ಬಳಕೆ ಆರೋಪ

ಉದಯಕಾಲ ನ್ಯೂಸ್, ಬಂಗಾರಪೇಟೆ: ಪಂಚಾಯಿತಿ ಸಿಬ್ಬಂದಿಯಿಂದ ಸರ್ಕಾರಿ ವಾಹನವನ್ನು ಬಳಸಿಕೊಂಡು ಮತಾಂತರಕ್ಕೆ ಯತ್ನಿಸಿರುವುದನ್ನ ಗಮನಿಸಿದ ಗ್ರಾಮಸ್ಥರು ಸ್ವಚ್ಛವಾಹಿನಿಯ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡ ಘಟನೆ ಶನಿವಾರ ನಡೆದಿದೆ.

ತಾಲೂಕಿನ ಗುಲ್ಲಹಳ್ಳಿ ಗ್ರಾಪಂ ವ್ಯಾಪ್ತಿಯ ದಿನ್ನೂರು ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವಚ್ಛತೆ ವಾಹಿನಿಯಲ್ಲಿ ತೆರಳಿ ಮನೆಗಳಲ್ಲಿ ಕಸವನ್ನು ತೆಗೆದುಕೊಳ್ಳುವ ನೆಪದಲ್ಲಿ ಕ್ರೈಸ್ ಸಮುದಾಯಕ್ಕೆ ಸಂಬಂಧಿಸಿದ ಕರಪತ್ರಗಳನ್ನು ಹಂಚಿ ಭಾನುವಾರ ಗೊಲ್ಲಹಳ್ಳಿ ಚರ್ಚ್‌ನಲ್ಲಿ ಪ್ರೇಯರ್ ಇದೆ. ಇಲ್ಲಿ ಬಂದವರಿಗೆ ಕಾಲು ಕೈ ನೋವು ಹಾಗೂ ಇನ್ನಿತರ ಸಮಸ್ಯೆಗಳು ಬಗೆಹರಿಯುತ್ತವೆ. ಪ್ರತಿಯೊಬ್ಬರೂ ಬನ್ನಿ ಎಂದು ಪ್ರಚೋದನೆ ಮಾಡುತ್ತಿದ್ದವರನ್ನು ದಿನ್ನೂರು, ಗುಲ್ಲಹಳ್ಳಿ ಗ್ರಾಮಸ್ಥರು ತಡೆದು ಸ್ವಚ್ಛ ವಾಹಿನಿಯಲ್ಲಿದ್ದ ಕರಪತ್ರಗಳನ್ನು ಹರಿದು ಹಾಕಿ, ಪಿಡಿಒ ಚಂದ್ರಕಲಾ ಅವರಿಗೆ ಮಾಹಿತಿ ತಿಳಿಸಿ, ಕೂಡಲೇ ಇವರನ್ನು ಕೆಲಸದಿಂದ ವಜಾ ಮಾಡಬೇಕೆಂದು ಒತ್ತಾಯಿಸಿದ ಘಟನೆ ನಡೆಯಿತು.

ಸ್ವಚ್ಛ ವಾಹಿನಿಯ ಸ್ವಚ್ಛತೆಗಾರರಾದ ಗೊಲ್ಲಹಳ್ಳಿ ಗ್ರಾಮದ ನಾಗವೇಣಿ, ಶಶಿಕಲಾ ಹಾಗೂ ಸ್ವಚ್ಛವಾಹಿನಿಯ ಚಾಲಕಿ ಕೊತ್ತೂರು ಗ್ರಾಮದ ವೆಂಕಟರತ್ನ ಅವರುಗಳನ್ನು ಗ್ರಾಮಸ್ಥರು ತಡೆದು ನಿಮಗೆ

ಈ ಪ್ರಚೋದನೆ ಮಾಡುವಂತೆ ಹೇಳಿದ್ದು ಯಾರು ಅವರನ್ನು ಇಲ್ಲಿಗೆ ಕಳುಹಿಸಿ ಇಲ್ಲವಾದರೆ ಪಂಚಾಯಿತಿ ಎದುರು ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕೆಲಕಾಲ ಕರಪತ್ರಗಳನ್ನು ಹಂಚಿದವರು ಹೈಡ್ರಾಮವನ್ನು ಸೃಷ್ಟಿಸಿ ನಾವು ಯಾವುದೇ ರೀತಿ ಕರಪತ್ರಗಳನ್ನು ಹಂಚಿಲ್ಲ ಎಂದು ಸ್ವಚ್ಛವಾಹಿನಿಯಲ್ಲಿ ಹೇಗೆ ಬಂತು ಎಂದು ನಮಗೆ ಗೊತ್ತಿಲ್ಲ ಎನ್ನುತ್ತಿದ್ದಂತೆ ಸ್ಥಳದಲ್ಲೇ ಇದ್ದ ಕೆಲವರು ನಮ್ಮ ಮನೆಗೆ ಬಂದು ನೀವೇ ನೀಡಿದ್ದೀರಿ. ಎಲ್ಲರ ಮುಂದೆ ಇಲ್ಲ ಎನ್ನುವುದು ಸರಿಯಲ್ಲ ಎನ್ನುತ್ತಿದ್ದಂತೆ ತಪ್ಪೊಪ್ಪಿಕೊಂಡು ಹೌದು ನಾವೇ ಕರಪತ್ರಗಳನ್ನು ಹಂಚಿದ್ದೇವೆ ಎಂದು ತಪ್ಪನ್ನು ಒಪ್ಪಿಕೊಂಡರು.

ನಾಳೆಯಿಂದ ಫಲಪುಷ್ಪ ಪ್ರದರ್ಶನ

ಉದಯಕಾಲ ನ್ಯೂಸ್, ಚಿಕ್ಕಬಳ್ಳಾಪುರ: ನಗರದ ಸರ್. ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26 ಮತ್ತು 27 ರಂದು ಎರಡು ದಿನ ಫಲಪುಷ್ಪ ಪ್ರದರ್ಶನವನ್ನು ಆಯೋಜಿಸಲಾಗುತ್ತಿದ್ದು, ಜಿಲ್ಲೆಯ ಎಲ್ಲ ಸಾರ್ವಜನಿಕರು ಬಂದು ವೀಕ್ಷಿಸುವಂತೆ ತೋಟಗಾರಿಕೆ ಜಂಟಿ ನಿರ್ದೇಶಕಿ ಎಂ. ಗಾಯತ್ರಿ ಅವರು ಮನವಿ ಮಾಡಿದರು.

ಶುಕ್ರವಾರ ನಗರದ ಹೊರವಲಯದ ನಂದಿ ಕ್ರಾಸ್ ಬಳಿ ಇರುವ ತೋಟಗಾರಿಕೆ ಇಲಾಖೆಯ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಜಿಲ್ಲಾಡಳಿತ, ಜಿಪಂ ಮತ್ತು ತೋಟಗಾರಿಕೆ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಸದರಿ ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್ ಅವರು ನೆರವೇರಿಸಲಿದ್ದಾರೆ. ಪ್ರತಿ ದಿನ ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ ಪ್ರದರ್ಶನವನ್ನು ನೋಡಲು ಎಲ್ಲ ಸಾರ್ವಜನಿಕರು, ರೈತರಿಗೆ ಉಚಿತ ಪ್ರವೇಶವಿದೆ ಎಂದು ತಿಳಿಸಿದರು.

ಪ್ರಮುಖ ಆಕರ್ಷಣೆಗಳಾಗಿ ಹೂವುಗಳಿಂದ ಅಲಂಕರಿಸಿದ ಐಸಿಸಿ ಮಹಿಳಾ ವಿಶ್ವ ಕಪ್, ಕ್ರಿಕೆಟ್ ಬ್ಯಾಟ್ ಮತ್ತು ಬಾಲ್, ಸಾಲುಮರದ ತಿಮ್ಮಕ್ಕ ಅವರ ಪ್ರತಿಮೆ, ಡಾ ಎಂ ಹೆಚ್ ಮರೀಗೌಡರ ಪ್ರತಿಮೆ, ಹಸು-ಕರು ಪ್ರತಿಮೆ, ಜಿಲ್ಲೆಯ ರೈತ ಮಹಿಳೆಯರಿಂದ ತಯಾರಿಸಲ್ಪಡುವ ಹೂವಿನ ಜೋಡಣೆ ಕಲಾಕೃತಿ, ಹೂವುಗಳಿಂದ ಅಲಂಕರಿಸಿದ ಆಧುನಿಕ ಮಹಿಳೆ ಕಲಾಕೃತಿ, ಮಾದರಿ ಕೈತೋಟ (Kitchen Garden), ಹಣ್ಣು ತರಕಾರಿಗಳಲ್ಲಿ ವಿವಿಧ ಕಲಾಕೃತಿಗಳ ಕೆತ್ತನೆ, ಜಾನೂರ್ ಕಲಾಕೃತಿಗಳ ಪ್ರದರ್ಶನ, ಭೌಗೋಳಿಕ ಗುರುತಿಸುವಿಕೆ ಹೊಂದಿದ ಬೆಳೆಗಳ ಪ್ರದರ್ಶನ, ಔಷಧಿ ಸಸ್ಯಗಳ ಪ್ರದರ್ಶನ, ಜೇನು ಸಾಕಾಣಿಕೆ ಪ್ರದರ್ಶನ, ICMR ಶಿಫಾರಸ್ಸಿನನ್ವಯ ಸಮತೋಲನ ಆಹಾರ ವಿಂಗಡಣೆ ಕುರಿತ ಕಲಾಕೃತಿ, ಹೂವು ಕುಂಡಗಳ ಜೋಡಣೆ, ವಿವಿಧ ರೀತಿಯ ದೇಶೀಯ ಹಾಗೂ ವಿದೇಶೀಯ ಹೂ, ಹಣ್ಣು ಹಾಗೂ ತರಕಾರಿಗಳ ಪ್ರದರ್ಶನ, ಇಲಾಖಾ ಯೋಜನೆಗಳ ಮಾಹಿತಿ ಹಾಗೂ ಇತ್ಯಾದಿಗಳನ್ನು ಪ್ರದರ್ಶಿಸಲಾಗುತ್ತದೆ. ತೋಟಗಾರಿಕೆ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ಬೆಂಬಲ ಬೆಲೆ: ಮುಸುಕಿನ ಜೋಳ ಖರೀದಿ ಶುರು

ರೈತ ಸಂಘಟನೆಯ ಹೋರಾಟಕ್ಕೆ ಸಿಕ್ಕ ಜಯ: ಲಕ್ಷ್ಮೀನಾರಾಯಣ

ಉದಯಕಾಲ ನ್ಯೂಸ್, ಗುಡಿಬಂಡೆ: ಜಿಲ್ಲೆಯಲ್ಲಿ ಮುಸುಕಿನ ಜೋಳಕ್ಕೆ ಮಾರುಕಟ್ಟೆಯಲ್ಲಿ ಸರಿಯಾದ ಬೆಲೆ ಸಿಗದೆ ಕಂಗಾಲಾಗಿದ್ದ ರೈತರಿಗೆ ಅಖಿಲ ಕರ್ನಾಟಕ ರೈತ ಸಂಘಟನೆಯ ಹೋರಾಟದಿಂದ ದೊಡ್ಡ ಜಯ ಸಿಕ್ಕಿದೆ. ರೈತರ ಹಿತರಕ್ಷಣೆಗಾಗಿ ಸರ್ಕಾರವು ಮಧ್ಯಪ್ರವೇಶಿಸಿದ್ದು, ಬೆಂಬಲ ಬೆಲೆಯೊಂದಿಗೆ ಮುಸುಕಿನ ಜೋಳ ಖರೀದಿಸಲು ಆದೇಶ ಹೊರಡಿಸಿದೆ. ಇದು ಅಖಿಲ ಕರ್ನಾಟಕ ರೈತ ಸಂಘಟನೆಯ ಹೋರಾಟದ ಫಲ ಎಂದು ಸಂಘಟನೆಯ ಮುಖಂಡರು ತಿಳಿಸಿದರು.

ಪಟ್ಟಣದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅಖಿಲ ಕರ್ನಾಟಕ ರೈತ ಸಂಘಟನೆಯ ಜಿಲ್ಲಾ ಸಹ ಸಂಚಾಲಕ ಹೆಚ್.ಪಿ.ಲಕ್ಷ್ಮೀನಾರಾಯಣ, ಮುಸುಕಿನ ಜೋಳದ ಧಾರಣೆ ತೀವ್ರ ಕುಸಿತ ಕಂಡಿದ್ದರಿಂದ ಕಳವಳಗೊಂಡಿದ್ದ ಸಂಘಟನೆ ಇತ್ತೀಚೆಗೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿತ್ತು. ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ಬೆಂಬಲ ಬೆಲೆ ನೀಡಬೇಕೆಂದು ಒತ್ತಾಯಿಸಲಾಗಿತ್ತು. ಈ ಸಂದರ್ಭದಲ್ಲಿ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಅವರು ರೈತರ ಪರವಾಗಿ ನಿಂತು ಸರ್ಕಾರದ ಮೇಲೆ ಒತ್ತಡ ಹೇರಿದ್ದರಿಂದ ಖರೀದಿ ಪ್ರಕ್ರಿಯೆಗೆ ಅನುಮೋದನೆ ಸಿಕ್ಕಿದೆ ಎಂದರು.

ತಾಪಂ ಕೆಡಿಪಿ ಸದಸ್ಯ ರಿಯಾಜ್ ಪಾಷ ಮಾತನಾಡಿ, ಬಾಗೇಪಲ್ಲಿ ಮತ್ತು ಗೌರಿಬಿದನೂರು ಎಪಿಎಂಸಿಗಳಲ್ಲಿ ರೈತರಿಂದ ನೇರವಾಗಿ ಸುಮಾರು 1,24,000 ಕ್ವಿಂಟಾಲ್ ಮುಸುಕಿನ ಜೋಳವನ್ನು ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಕ್ವಿಂಟಾಲ್‌ಗೆ 2,150 ರೂ. ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಈಗಾಗಲೇ ನೋಂದಣಿ ಪ್ರಕ್ರಿಯೆಯೂ ಚಾಲನೆಗೊಂಡಿದೆ. ರೈತರ ಬೆನ್ನಿಗೆ ನಿಂತು ಸಹಕರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಸಿ. ಸುಧಾಕರ್, ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ಹಾಗೂ ಜಿಲ್ಲಾಧಿಕಾರಿಗಳಿಗೆ ಸಂಘಟನೆಯ ಪರವಾಗಿ ಧನ್ಯವಾದಗಳನ್ನು ಅರ್ಪಿಸಿದರು.

ಜೊತೆಗೆ ರೈತರ ಹಿತಾಸಕ್ತಿ ಕಾಪಾಡುವಲ್ಲಿ ನಮ್ಮ ಶಾಸಕರು ಹಾಗೂ ಸರ್ಕಾರ ಸದಾ ಮುಂದಿರುತ್ತದೆ ಎನ್ನುವ ಭರವಸೆ ನಮಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಂಘಟನೆಯ ಮುಖ